ಇತರೆ ಯೋಜನೆಗಳಲ್ಲಿ ಆದ್ಯತೆ ಮೇರೆಗೆ ಕಾಮಗಾರಿಗಳನ್ನು ತೆಗೆದುಕೊಂಡು ಪುನರುಜ್ಜೀವನಗೊಳಿಸಲಾಗುತ್ತಿದೆ.

ಇದೇ ರೀತಿ ಈ ಗ್ರಾಮದ ಯೋಜನೆಯನ್ನು ಕೂಡಾ ಪುನಃಶ್ಚೇತನಗೊಳಿಸಲಾಗುವುದು.

ಬೈಲಹೊಂಗಲ ತಾಲ್ಲೂಕಿನಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಮನೆಗಳ ನಿರ್ಮಾಣ

4094 (4528) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಈ ವರ್ಷ ವಿವಿಧ ಯೋಜನೆಗಳಡಿಯಲ್ಲಿ ಎಷ್ಟು ಮನೆಗಳನ್ನು ಕಟ್ಟಬೇಕೆಂದು ಉದ್ದೇಶಿಸಲಾಗಿದೆ;

ಆ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಮಲಪ್ರಭಾ ಮುಳುಗಡೆ ಪ್ರದೇಶದ ಜನರು ಬೈಲಹೊಂಗಲದಲ್ಲಿ ವಲಸೆಯಾಗಿದ್ದು ಅವರಿಗೆ ಹೆಚ್ಚಿನ ಮನೆ ಬೇಕಾಗಿರುವುದರಿಂದ ಮನೆ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ;

ಇ) ಭೂಮಿ ವಶಪಡಿಸಿಕೊಳ್ಳುವುದರಲ್ಲಿ ವಿಳಂಬವಾಗುತ್ತಿರುವ ಸಂಗತಿ ನಿಜವೇ;

ಈ) ಹಾಗಿದ್ದಲ್ಲಿ ಮಾರುಕಟ್ಟೆ ಬೆಲೆಯನ್ನು ಕೊಟ್ಟು ಜಮೀನು ಖರೀದಿಸಿ ಹೆಚ್ಚಿನ ಮನೆಗಳನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು):

ಅ) 2003-04ರಲ್ಲಿ 2,00,000 ಮನೆಗಳನ್ನು ಹಾಗೂ ಇಂದಿರಾ ಆವಾಸ್ ಯೋಜನೆಯಡಿಯಲ್ಲಿ 37704 ಮನೆಗಳನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

ಆ) ಮನೆ ಕಟ್ಟಲು ಕ್ರಮ ಕೈಗೊಳ್ಳಲಾಗುವುದು.

ಇ) ಇಲ್ಲ

ಈ) ಸರ್ಕಾರವು ನಿಗಧಿಪಡಿಸಿರುವ Guidance Value ದರದನ್ವಯ ಜಮೀನು ಖರೀದಿಸಿ ಮನೆಗಳನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದು.

ಬೆಳಗಾವಿ ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ತುಂಬುವುದು

4095 (4529) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎಷ್ಟು ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುತ್ತವೆ? ಜಿಲ್ಲಾವಾರು ಮಾಹಿತಿ ನೀಡುವುದು?

ಆ) ಈ ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಇ) ಮೊದಲಿನಂತೆ ಜಿಲ್ಲಾಧಿಕಾರಿಗಳ ಮುಖಾಂತರ ಗುತ್ತಿಗೆ ಆಧಾರದ ಮೇಲೆ ಈ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದೇ?

ಈ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇರುತ್ತವೆ? ಮತ್ತು ಯಾವ ಯಾವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುತ್ತವೆ? ತಾಲ್ಲೂಕುವಾರು ವಿವರ ನೀಡುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ರಾಜ್ಯದಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 108 ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುತ್ತವೆ. (ಜಿಲ್ಲಾವಾರು ಪಟ್ಟಿಯನ್ನು ಅನುಬಂಧ-Iರಲ್ಲಿ ಲಗತ್ತಿಸಿದೆ).